**Akashvani : Bangalore**
**28.04.2025 / 14.30 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**28.04.2025 / 14.30  hrs**

**<><*<><>*><>**

ಮುಖ್ಯಾಂಶಗಳು

**೧. ರೈಲ್ವೆ ಇಲಾಖೆ ಪರೀಕ್ಷೆ ವೇಳೆ ಅಭ್ಯರ್ಥಿಗಳ ಜನಿವಾರ, ಮಂಗಳಸೂತ್ರ ತೆಗೆಸದಂತೆ ಕೇಂದ್ರ ಸಚಿವ ವಿ.ಸೋಮಣ್ಣ ನಿರ್ದೇಶನ**

**೨. ಉತ್ತರಕರ್ನಾಟಕ ಭಾಗದಲ್ಲಿ ಪಡಿತರ ಅಕ್ಕಿಯ ಜೊತೆ ಜೋಳ ವಿತರಣೆ- ಸಚಿವ ಕೆ.ಎಚ್.ಮುನಿಯಪ್ಪ**

**೩. ನವದೆಹಲಿಯಲ್ಲಿಂದು ಹಿರಿಯ ನಟ ಅನಂತ್‌ನಾಗ್ ಸೇರಿದಂತೆ ರಾಜ್ಯದ ಒಂಭತ್ತು ಮಂದಿಗೆ ರಾಷ್ಟ್ರಪತಿಗಳಿಂದ ಪದ್ಮ ಪ್ರಶಸ್ತಿ ಪ್ರದಾನ**

**೪. ಹದಿನೆಂಟು ಬಿಜೆಪಿ ಶಾಸಕರ ಅಮಾನತು ಪ್ರಕರಣ; ರಾಜ್ಯಪಾಲರು ಮಧ್ಯಪ್ರವೇಶಿಸುವಂತೆ ಬಿಜೆಪಿ ನಿಯೋಗ ಮನವಿ**

**೫. ಕೇಂದ್ರ ಸರ್ಕಾರದ ಬೆಲೆ ಏರಿಕೆ ಹಾಗೂ ಸಂವಿಧಾನ ವಿರೋಧಿ ನೀತಿ ಖಂಡಿಸಿ, ಬೆಳಗಾವಿಯಲ್ಲಿ ಕಾಂಗ್ರೆಸ್ ಪ್ರತಿಭಟನೆ**

**<><*<><>*><>**

ರೈಲ್ವೆ ನೇಮಕಾತಿ ಮಂಡಳಿ ಆಯೋಜಿಸುವ ನರ್ಸಿಂಗ್ ಮೇಲ್ವಿಚಾರಕರ ಹುದ್ದೆಗಳ ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳಿಂದ ಜನಿವಾರ ಮತ್ತು ಮಂಗಳಸೂತ್ರಗಳನ್ನು ತೆಗೆಯದಂತೆ ಅಧಿಕಾರಿಗಳಿಗೆ ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ರಾಜ್ಯ ಸಚಿವ ವಿ. ಸೋಮಣ್ಣ ನಿರ್ದೇಶನ ನೀಡಿದ್ದಾರೆ. ಅಭ್ಯರ್ಥಿಗಳ ಪ್ರವೇಶ ಪತ್ರಗಳಲ್ಲಿ ಹಾಗೂ ರೈಲ್ವೆ ಇಲಾಖೆ ಹೊರಡಿಸಿದ ಸುತ್ತೋಲೆಯಲ್ಲಿ, ಜನಿವಾರ, ಮಂಗಳಸೂತ್ರ ಧರಿಸಿದ ವ್ಯಕ್ತಿಗಳನ್ನು ಪರೀಕ್ಷಾ ಕೇಂದ್ರಗಳ ಒಳಗೆ ಪ್ರವೇಶಿಸಲು ಅನುಮತಿ ನೀಡಲಾಗುವುದಿಲ್ಲ ಎಂದು ಹೇಳಲಾಗಿತ್ತು. ವಿವಿಧ ಹಿಂದೂ ಸಂಘಟನೆಗಳು ಈ ಸುತ್ತೋಲೆಯ ಬಗ್ಗೆ ಆಕ್ರೋಶ ವ್ಯಕ್ತಪಡಿಸಿದ್ದವು. ಈ ಹಿನ್ನೆಲೆಯಲ್ಲಿ ಮಧ್ಯಪ್ರವೇಶಿಸಿದ ಕೇಂದ್ರ ಸಚಿವ ವಿ. ಸೋಮಣ್ಣ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ ಎಂದು

ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ದಕ್ಷಿಣ ಕನ್ನಡ ಸಂಸದ ಬ್ರಿಜೇಶ್ ಚೌಟ ಮಾಹಿತಿ ನೀಡಿದ್ದಾರೆ. ರೈಲ್ವೆ ನೇಮಕಾತಿ ಮಂಡಳಿಯ ನರ್ಸಿಂಗ್ ಸೂಪರಿಂಟೆಂಡೆಂಟ್ ಪರೀಕ್ಷೆ ಇದೇ ೨೮, ೨೯ ಹಾಗೂ ೩೦ ರಂದು ನಡೆಯಲಿದೆ.

<><*<><>*><>

ರೈಲ್ವೆ ಪರೀಕ್ಷೆಯಲ್ಲಿ ಮಂಗಳಸೂತ್ರ, ಜನಿವಾರ ತೆಗೆಯಬೇಕು ಎಂಬ ರೈಲ್ವೇ ಇಲಾಖೆ ಆದೇಶ ಸರಿಯಲ್ಲ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಆಗ್ರಹಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೂಡಲೇ ಈ ಸುತ್ತೋಲೆಯನ್ನು ಹಿಂಪಡೆಯಬೇಕು ಎಂದು ಒತ್ತಾಯಿಸಿದ್ದಾರೆ. ಇದೇ ವೇಳೆ ಅಗತ್ಯ ವಸ್ತುಗಳ ಬೆಲೆ ಏರಿಕೆಗೆ ಕೇಂದ್ರ ಸರ್ಕಾರವೇ ಕಾರಣ ಎಂದು ಅವರು ಆರೋಪಿಸಿದ್ದಾರೆ.

<><*<><>*><>

ಉತ್ತರಕರ್ನಾಟಕ ಭಾಗದಲ್ಲಿ ಪಡಿತರ ಅಕ್ಕಿಯ ಜೊತೆಗೆ ಜೋಳ ನೀಡಲು ಸಾಧ್ಯವಾಗದ ಹಿನ್ನೆಲೆಯಲ್ಲಿ ಹೆಚ್ಚುವರಿ ಒಂದು ಲಕ್ಷ ಟನ್ ಜೋಳ ಪೂರೈಸಲು ಕೇಂದ್ರಕ್ಕೆ ಮನವಿ ಮಾಡಲಾಗಿದೆ ಎಂದು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವ ಕೆ.ಎಚ್.ಮುನಿಯಪ್ಪ ತಿಳಿಸಿದ್ದಾರೆ. ಬೆಳಗಾವಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇಂದ್ರದಿಂದ ಅಕ್ಕಿ ಪೂರೈಕೆಯಾದ ನಂತರ ಪ್ರತಿ ಪಡಿತರ ಚೀಟಿಗೆ ಎರಡು ಕೆ.ಜಿ ಜೋಳ ನೀಡಲಾಗುವುದು ಎಂದು ಹೇಳಿದ್ದಾರೆ. ದಕ್ಷಿಣ ಭಾಗದಲ್ಲಿ ರಾಗಿಯನ್ನೂ ನೀಡುವ ಉದ್ದೇಶವಿದೆ ಎಂದು ತಿಳಿಸಿದ್ದಾರೆ. ಹೊಸ ಬಿಪಿಎಲ್ ಚೀಟಿ ಕೋರಿ ಅಂತರ್ಜಾಲದಲ್ಲಿ ೧ ಲಕ್ಷ ೨೬ ಸಾವಿರದ ೬೦೭ ಅರ್ಜಿಗಳು ಸಲ್ಲಿಕೆಯಾಗಿದ್ದು, ಈ ಪೈಕಿ ೮೭ ಸಾವಿರಕ್ಕೂ ಅಧಿಕ ಪಡಿತರ ಚೀಟಿಗಳನ್ನು ವಿಲೇವಾರಿ ಮಾಡಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಬೆಳಗಾವಿ ಜಿಲ್ಲೆಯಲ್ಲಿ ೧೧ ಸಾವಿರದ ೭೯೬ ಅನರ್ಹ ಪಡಿತರ ಚೀಟಿಗಳನ್ನು ರದ್ದುಗೊಳಿಸಿ, ೪ ಲಕ್ಷ, ೭೫ ಸಾವಿರದ ೪೮೧ ರೂಪಾಯಿಗಳ ದಂಡ ವಸೂಲಿ ಮಾಡಲಾಗಿದೆ. ಅನಧಿಕೃತವಾಗಿ ಬಳಕೆ ಮಾಡುತ್ತಿದ್ದ ೮೪ ಗೃಹಬಳಕೆ ಸಿಲಿಂಡರ್ ಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಸಚಿವರು ಮಾಹಿತಿ ನೀಡಿದ್ದಾರೆ.

<><*<><>*><>

ರಾಷ್ಟ್ರಪತಿ ಭವನದಲ್ಲಿ ನಡೆಯಲಿರುವ ನಾಗರಿಕ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿಂದು ಸಂಜೆ ರಾಷ್ಟ್ರಪತಿ ದ್ರೌಪದಿ ಮುರ್ಮು ಪದ್ಮ ಪ್ರಶಸ್ತಿಗಳನ್ನು ಪ್ರದಾನ ಮಾಡಲಿದ್ದಾರೆ. ರಾಜ್ಯದ ಒಂಭತ್ತು

ಮಂದಿ ಪದ್ಮ ಪ್ರಶಸ್ತಿಗಳಿಗೆ ಭಾಜನರಾಗಿದ್ದಾರೆ. ಪಿಟೀಲು ವಾದಕ ಮತ್ತು ಸಂಯೋಜಕ ಡಾ. ಎಲ್. ಸುಬ್ರಮಣಿಯಂ ಪದ್ಮವಿಭೂಷಣ ಪ್ರಶಸ್ತಿ ಪಡೆಯಲಿದ್ದಾರೆ. ಹಿರಿಯ ಸಂಪಾದಕ ಮತ್ತು ಪ್ರಸಾರ ಭಾರತಿ ಅಧ್ಯಕ್ಷ ಎ. ಸೂರ್ಯ ಪ್ರಕಾಶ್, ಚಲನಚಿತ್ರ ನಟರಾದ ಅನಂತ್ ನಾಗ್, ಪದ್ಮಭೂಷಣ ಪ್ರಶಸ್ತಿ ಪುರಸ್ಕೃತರಾಗಿದ್ದಾರೆ. ಕಲಾ ಕ್ಷೇತ್ರದ ಸಾಧನೆಗಾಗಿ ಬಾಗಲಕೋಟೆಯ ಭೀಮವ್ವ ದೊಡ್ಡ ಬಾಳಪ್ಪ ಶಿಳ್ಳೆಕ್ಯಾತರ, ಹಾಸನ ರಘು, ಉದ್ಯಮ ಕ್ಷೇತ್ರದಿಂದ ಪ್ರಶಾಂತ್ ಪ್ರಕಾಶ್, ಕಲಾ ಕ್ಷೇತ್ರದ ಸಾಧನೆಗಾಗಿ ರಿಕ್ಕಿ ಕೇಜ್ , ಜಾನಪದ ಗಾಯಕ ವೆಂಕಪ್ಪ ಅಂಭಾಜಿ ಸುಗತೇಕರ, ಹಿರಿಯ ಕ್ಯಾನ್ಸರ್ ಚಿಕಿತ್ಸಾ ತಜ್ಞೆ ವಿಜಯಲಕ್ಷ್ಮೀ ದೇಶಮಾನೆ ಪದ್ಮ ಪ್ರಶಸ್ತಿಗೆ ಭಾಜನರಾಗಿದ್ದಾರೆ.

<><*<><>*><>

ಬಿಜೆಪಿಯ ೧೮ ಶಾಸಕರನ್ನು ೬ ತಿಂಗಳ ಕಾಲ ಅಮಾನತು ಮಾಡಿರುವುದನ್ನು ಹಿಂಪಡೆಯುವ ಕುರಿತು ವಿಧಾನಸಭಾಧ್ಯಕ್ಷರಿಗೆ ಮಾರ್ಗದರ್ಶನ ನೀಡುವಂತೆ ಬಿಜೆಪಿ ನಿಯೋಗ ಇಂದು ರಾಜ್ಯಪಾಲರಿಗೆ ಮನವಿ ಸಲ್ಲಿಸಿತು. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಮತ್ತು ವಿರೋಧ ಪಕ್ಷದ ನಾಯಕ ಆರ್. ಅಶೋಕ ನೇತೃತ್ವದಲ್ಲಿ ಬಿಜೆಪಿ ಶಾಸಕರ ನಿಯೋಗ ರಾಜ್ಯಪಾಲರನ್ನು ಭೇಟಿ ಮಾಡಿತು. ಬಳಿಕ ಮಾತನಾಡಿದ ಬಿ.ವೈ.ವಿಜಯೇಂದ್ರ, ಶಾಸಕರ ಅಮಾನತು ಸಂವಿಧಾನ ವಿರೋಧಿ ನಡೆಯಾಗಿದ್ದು, ಸಭಾಧ್ಯಕ್ಷರು ಇದಕ್ಕೆ ಬೆಂಬಲ ನೀಡಬಾರದು ಎಂದು ಒತ್ತಾಯಿಸಿದರು. ಆರ್. ಅಶೋಕ ಮಾತನಾಡಿ, ಶಾಸಕರ ಅಮಾನತು ಸಂವಿಧಾನ ಬಾಹಿರ ಎಂದು ರಾಜ್ಯಪಾಲರ ಗಮನ ಸೆಳೆಯಲಾಗಿದೆ. ರಾಜ್ಯಪಾಲರು, ಸರ್ಕಾರ ಹಾಗೂ ಸಭಾಧ್ಯಕ್ಷರ ಜೊತೆ ಮಾತನಾಡುವುದಾಗಿ ಭರವಸೆ ನೀಡಿದ್ದಾರೆ ಎಂದು ಸ್ಪಷ್ಟಪಡಿಸಿದರು.

<><*<><>*><>

ಕೇಂದ್ರ ಸರ್ಕಾರದ ಬೆಲೆ ಏರಿಕೆ ಹಾಗೂ ಸಂವಿಧಾನ ವಿರೋಧಿ ನೀತಿ ಖಂಡಿಸಿ ಬೆಳಗಾವಿಯಲ್ಲಿಂದು ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ಕಾಂಗ್ರೆಸ್ ಪ್ರತಿಭಟನೆ ನಡೆಸುತ್ತಿದೆ. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಚಿವರಾದ ಸತೀಶ್ ಜಾರಕಿಹೊಳಿ, ಲಕ್ಷ್ಮೀ ಹೆಬ್ಬಾಳ್ಕರ್ ಸೇರಿದಂತೆ ಹಲವು ಸಚಿವರು ಪ್ರತಿಭಟನೆಯಲ್ಲಿ ಭಾಗಿಯಾಗಿದ್ದಾರೆ. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಾತನಾಡಿ, ಕೇಂದ್ರ ಸರ್ಕಾರದ ಬೆಲೆ ಏರಿಕೆ ನೀತಿಯನ್ನು ಖಂಡಿಸಿದರು.

<><*<><>*><>

ಹಾವೇರಿ ಜಿಲ್ಲೆಯ ಹಲವು ಕಡೆಗಳಲ್ಲಿ ಬಿರುಗಾಳಿ ಸಹಿತ ಭಾರೀ ಮಳೆಯಾಗಿದೆ. ಜಿಲ್ಲೆಯ ರಟ್ಟೀಹಳ್ಳಿ ಹಾಗೂ ಸುತ್ತಮುತ್ತಲೂ ಭಾರೀ ಗಾಳಿಯಿಂದಾಗಿ ೮೦ಕ್ಕೂ ಹೆಚ್ಚು ವಿದ್ಯುತ್ ಕಂಬಗಳು ನೆಲಕ್ಕುರುಳಿವೆ. ಕೆಲವೆಡೆ ಆಸ್ತಿಪಾಸ್ತಿ ಹಾನಿ ಉಂಟಾಗಿದ್ದು, ರಟ್ಟೀಹಳ್ಳಿಯ ರಸ್ತೆಯಲ್ಲಿ ರಸ್ತೆಗೆ ಅಡ್ಡಲಾಗಿ ಬೃಹತ್ ಮರವೊಂದು ಉರುಳಿದೆ. ಹಲವು ವಾಹನಗಳು ಜಖಂಗೊಂಡಿದ್ದು, ಕೆಲವು ಮನೆ ಮೇಲಿನ ತಗಡುಗಳು ಗಾಳಿಗೆ ಹಾರಿ ಹೋಗಿವೆ. ಈ ನಡುವೆ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ, ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಉಚಿತ ಸಹಾಯವಾಣಿ ಕೇಂದ್ರ ತೆರೆದಿದೆ. ಟೋಲ್ ಫ್ರೀ ಸಂಖ್ಯೆ ೦೮೩೭೫-೨೪೯೧೦೨ ಗೆ ಸಾರ್ವಜನಿಕರು ಕರೆ ಮಾಡಿ ತಮ್ಮ ಅಹವಾಲು ಹಾಗೂ ಸಮಸ್ಯೆಗಳನ್ನು ದಾಖಲಿಸಿ ತ್ವರಿತ ಪರಿಹಾರ ಕಂಡುಕೊಳ್ಳುವಂತೆ ಜಿಲ್ಲಾಧಿಕಾರಿ ಡಾ.ವಿಜಯಮಹಾಂತೇಶ ದಾನಮ್ಮನವರ ತಿಳಿಸಿದ್ದಾರೆ.

<><*<><>*><>

ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆಯಡಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯು ಮಾನವ ದಿನಗಳ ಸೃಜನೆಯಲ್ಲಿ ಗುರಿ ಮೀರಿ ಸಾಧನೆ ಮಾಡಿದೆ. ಈ ಮೂಲಕ ನರೇಗಾ ಯೋಜನೆಯಡಿ ೪ನೇ ಸ್ಥಾನವನ್ನು ಪಡೆದುಕೊಂಡಿದೆ. ಜಿಲ್ಲೆಯು ೨೦೨೪-೨೫ನೇ ಸಾಲಿನಲ್ಲಿ ೧೭.೩೧೦ ಲಕ್ಷ ಮಾನವ ದಿನಗಳ ಸೃಜನೆ ಮಾಡಿ ಶೇ ೧೧೭.೫೦ ಪ್ರಗತಿಯನ್ನು ಸಾಧಿಸಿದೆ. ಯೋಜನೆಯಲ್ಲಿ ಜಿಲ್ಲೆಯ ನಾಲ್ಕು ತಾಲ್ಲೂಕುಗಳಿಂದ ಒಟ್ಟು ೧ಲಕ್ಷದ ೧೯ ಸಾವಿರದ ೭೭೯ ಉದ್ಯೋಗ ಚೀಟಿಯನ್ನು ಹೊಂದಿರುವ ನೋಂದಾಯಿತ ಕುಟುಂಬಗಳಿದ್ದು, ಅದರಲ್ಲಿ ೨ ಲಕ್ಷ ೭೧ ಸಾವಿರದ ೧೨೮ ಜನರು ಕೂಲಿಕಾರರಿದ್ದು ಯೋಜನೆಯ ಸದುಪಯೋಗವನ್ನು ಪಡೆದುಕೊಳ್ಳುತ್ತಿದ್ದಾರೆ. ಉದ್ಯೋಗ ಚೀಟಿಯನ್ನು ಹೊಂದಿರುವ ಕುಟುಂಬಗಳಿಗೆ ವಾರ್ಷಿಕವಾಗಿ ೧೦೦ ದಿನಗಳ ಉದ್ಯೋಗವನ್ನು ನೀಡಲಾಗುತ್ತಿದ್ದು, ಅರ್ಥಿಕವಾಗಿ ಸಬಲರಾಗಲು ವಿವಿಧ ಇಲಾಖೆಗಳು ಮಹತ್ವದ ಪಾತ್ರವನ್ನು ವಹಿಸಿವೆ. ಗ್ರಾಮ ಪಂಚಾಯಿತಿ ವತಿಯಿಂದ ನಡೆಯುತ್ತಿರುವ ಸಮುದಾಯ ಚಟುವಟಿಕೆಗಳು ಸಮಗ್ರವಾಗಿ ಶಾಲಾಭಿವೃದ್ಧಿ, ಸ್ಮಶಾನ, ಚರಂಡಿ, ಬೂದು ನೀರು ನಿರ್ವಹಣೆ, ಘನ ಮತ್ತು ದ್ರವತ್ಯಾಜ್ಯ ನಿರ್ವಹಣೆ, ಸಂಜೀವಿನಿ ಭವನ, ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಮಿಷನ್‌ಗಳ ಅಭಿವೃದ್ಧಿಗೆ ಸಹಕಾರಿಯಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ಕೆ.ಎನ್‌ಅನುರಾಧ ತಿಳಿಸಿದ್ದಾರೆ.

<><*<><>*><>

ಕೋಲಾರ ಜಿಲ್ಲೆಯ ಮಾಲೂರು ತಾಲೂಕಿನ ಕೂರಂಡಹಳ್ಳಿ ಕೈಗಾರಿಕಾ ಪ್ರದೇಶದಲ್ಲಿ ಇಂದು ಬೆಳಗ್ಗೆ ಪೈಂಟ್ಸ್ ತಯಾರಿಕಾ ಕಾರ್ಖಾನೆ ಒಂದರಲ್ಲಿ ಅಗ್ನಿ ಅವಘಡ ಸಂಭವಿಸಿದೆ. ಕೋಟ್ಯಾಂತರ ರೂಪಾಯಿ ಬೆಲೆಯ ದಾಸ್ತಾನು ಹಾಗೂ ಉಪಕರಣಗಳು ಬೆಂಕಿಗೆ ಆಹುತಿಯಾಗಿದೆ. ಕೋಲಾರ ಮತ್ತು ಮಾಲೂರಿನಿಂದ ಅಗ್ನಿಶಾಮಕ ದಳದ ವಾಹನಗಳು ಧಾವಿಸಿ ಬೆಂಕಿಯನ್ನು ನಂದಿಸುವ ಪ್ರಯತ್ನದಲ್ಲಿ ತೊಡಗಿವೆ. ಬೆಂಕಿಯಿಂದಾಗಿ ಕೈಗಾರಿಕಾ ವಲಯದಲ್ಲಿ ದಟ್ಟವಾದ ಹೊಗೆ ಆವರಿಸಿಕೊಂಡಿದೆ.

**<><*<><>*><>**

೧. ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆಯಿಂದ ರಾಜ್ಯದಲ್ಲಿ ೫೦ ಕೋಟಿ ರೂಪಾಯಿ ವೆಚ್ಚದಲ್ಲಿ ೭೫೦ ಕೆರೆಗಳನ್ನು ಪುನಶ್ಚೇತನ ಮಾಡಲಾಗಿದೆ ಎಂದು ಸಂಸ್ಥೆಯ ನಿರ್ದೇಶಕ ಲಕ್ಷ್ಮಣ್ ಹೇಳಿದ್ದಾರೆ. ನ್ಯಾಮತಿ ತಾಲೂಕಿನ ಒಡೆಯರ ಹತ್ತೂರು ಗ್ರಾಮದಲ್ಲಿ ಅಯ್ಯನ ಕೆರೆ ಹೂಳೆತ್ತುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

೨. ಚಿಕ್ಕಬಳ್ಳಾಪುರ ಜಿಲ್ಲೆ ಕನಗಾನಕೊಪ್ಪ ಬಳಿ ನಡೆಯುತ್ತಿರುವ ಕಲ್ಲು ಗಣಿಗಾರಿಕೆಯನ್ನು ವಿರೋಧಿಸಿ ಹಾಗೂ ರೈತರೊಬ್ಬರ ಮೇಲಿನ ಗುಂಡಿನ ದಾಳಿಯನ್ನು ಖಂಡಿಸಿ ಇಂದು ವಿವಿಧ ರೈತ ಸಂಘಟನೆಗಳು ನೀಡಿದ್ದ ಮಂಚೇನಹಳ್ಳಿ ಪಟ್ಟಣದ ಬಂದ್ ಗೆ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ೬.೪೦ ಕ್ಕೆ <>*><>**